**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ಇವರು ನಿಯಮ 330 ಎ ರಡಿ ಗಮನ ಸಂಖ್ಯೆ:3 ಕ್ಕೆ ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಉತ್ತರ.**

*****

**ಸೂಚನೆ:**

"ಅನ್ನಭಾಗ್ಯ ಅರ್ಹ- ಅನರ್ಹ ಜಿಜ್ಞಾಸೆ ಶ್ರೀಮಂತರು ಇಲ್ಲಿ ಅರ್ಹರು" ಎಂಬ ಶೀರ್ಷಿಕೆಯಡಿ ದಿನಾಂಕ 18.07.2023 ರ ವಿಜಯ ಕರ್ನಾಟಕ ಪತ್ರಿಕೆಯಲ್ಲಿ ವರದಿಯಾಗಿದೆ.

ಅಕ್ರಮ ದಾಖಲೆ, ಸುಳ್ಳು ಮಾಹಿತಿ ನೀಡಿ ಬಿಪಿಎಲ್ ಪಡಿತರ ಚೀಟಿ ಪಡೆದವರನ್ನು ಪತ್ತೆ ಹಚ್ಚುವಲ್ಲಿ ರಾಜ್ಯ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ವಿಫಲವಾಗಿದ್ದು, ಇದು ಸರಕಾರದ 'ಅನ್ನಭಾಗ್ಯ' ಯೋಜನೆಗೆ ದೊಡ್ಡ ಹೊರೆಯಾಗಿ ಪರಿಣಮಿಸಲಿದೆ, ಅದರಲ್ಲೂ ಅಕ್ರಮ ಬಿಪಿಎಲ್ ಕಾರ್ಡ್ ನಿಂದಾಗಿ ಈ ಹೊರೆ ದುಪ್ಪಟ್ಟಾಗಿದೆ ಎನ್ನುತ್ತಾರೆ ಅಧಿಕಾರಿಗಳು.

ರಾಜ್ಯದಲ್ಲಿ ಒಟ್ಟು 1,52,23,128 ಪಡಿತರ ಚೀಟಿದಾರರಿದ್ದು, ಇವುಗಳಲ್ಲಿ ಅಂತ್ಯೋದಯ ಕಾರ್ಡ್‌ಗಳು 10,89,886, ಬಿಪಿಎಲ್ ಕಾರ್ಡ್‌ಗಳು 1,17,23,307, ಎಪಿಎಲ್ ಕಾರ್ಡ್‌ಗಳು 24,09,935 ಇರುತ್ತದೆ. ರಾಜ್ಯದಲ್ಲಿ ಎಪಿಎಲ್‌ಗಿಂತ 5 ಪಟ್ಟು ಹೆಚ್ಚು ಬಿಪಿಎಲ್ ಕಾರ್ಡ್‌ಗಳಿವೆ. ಬಿಪಿಎಲ್ ಕಾರ್ಡ್ ಮಾನದಂಡ ಮೀರಿ ಶೇ.12 ಕ್ಕೂ ಅಧಿಕ ಬಿಪಿಎಲ್ ನೀಡಲಾಗಿದೆ. ಅದರಲ್ಲೂ ಗ್ರಾಮಾಂತರ ಭಾಗದ ಕೆಲವು ನ್ಯಾಯಬೆಲೆ ಅಂಗಡಿಯಲ್ಲಿ ಶೇ.60. ಬಿಪಿಎಲ್ ಕಾರ್ಡ್‌ಗಳು, ಶೇ.30 ಅಂತ್ಯೋದಯ, ಶೇ.10 ರಷ್ಟು ಎಪಿಎಲ್ ಕಾರ್ಡ್‌ಗಳಿರುವುದು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳ ಅಂಕಿ ಅಂಶಗಳಿಂದ ಸ್ಪಷ್ಟವಾಗಿದೆ.

ಪಡಿತರ ಮಾಹಿತಿ ನೀಡುವಾಗ ಕುಟುಂಬದ ಕಾರು ಒಡೆಯ, ಸರಕಾರಿ ನೌಕರ, ಐಟಿ ಪಾವತಿದಾರನ ಹೆಸರನ್ನು ಪಡಿತರ ಚೀಟಿಗೆ ಸೇರಿಸಿಯೇ ಇಲ್ಲ. ಕೇಂದ್ರ ಸರಕಾರ, ರಾಜ್ಯ ಸರಕಾರದಲ್ಲಿ ನೌಕರಿ ಗಿಟ್ಟಿಸಿಕೊಂಡವರು ಪಡೆದಿರುವುದನ್ನು ಆಹಾರ ಇಲಾಖಾ ಅಧಿಕಾರಿಗಳು ಪತ್ತೆಹಚ್ಚಿದ್ದಾರೆ.

2021 ಜನವರಿಯಿಂದ 2023 ಮಾ.28 ರ ತನಕ ರಾಜ್ಯದಲ್ಲಿ ಬಿಪಿಎಲ್ ಪಡಿತರ ಚೀಟಿಗಾಗಿ 8,45,396 ಮಂದಿ ಅರ್ಜಿ ಸಲ್ಲಿಸಿದ್ದು, 5,56,711 ಅರ್ಜಿಗಳ ವಿಲೇವಾರಿಯಾಗಿದೆ. 2,88,685 ಬಾಕಿಯಾಗಿದೆ. ಎಪಿಎಲ್ ಪಡಿತರ ಚೀಟಿಗಾಗಿ 1,76,241 ಮಂದಿ ಅರ್ಜಿ ಸಲ್ಲಿಸಿದ್ದು, 1,32,313 ಇತ್ಯರ್ಥವಾಗಿವೆ. ಬಾಕಿ 43,928 ಇತ್ಯರ್ಥವಾಗದೆ ಉಳಿದಿವೆ. ಬಿಪಿಎಲ್ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿದರೂ ಇತ್ಯರ್ಥವಾಗದೆ ಬಾಕಿ ಉಳಿದ ಅರ್ಹರು ಅನ್ನಭಾಗ್ಯದಿಂದ ವಂಚಿತರಾಗುವ ಸಾಧ್ಯತೆ ಇದೆ.

ಆದ್ದರಿಂದ ಅನರ್ಹರನ್ನು ಗುರುತಿಸಿ ಪಡಿತರ ಚೀಟಿಗಳನ್ನು ರದ್ದು ಪಡಿಸಲು ಹಾಗೂ ಅರ್ಹ ಫಲಾನುಭವಿಗಳಿಗೆ ಹೊಸದಾಗಿ ಪಡಿತರ ಚೀಟಿಗಳನ್ನು ಪರಿಶೀಲಿಸಿ ವಿತರಿಸಲು, ನಿಯಮ 330A ರಂತೆ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಸಚಿವರಲ್ಲಿ ವಿಷಯವನ್ನು ಪ್ರಸ್ತಾಪಿಸುತ್ತಿದ್ದೇನೆ.

**ಉತ್ತರ:**

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ನಗರ ಪ್ರದೇಶದಲ್ಲಿ ಶೇ.50ರಷ್ಟು ಹಾಗೂ ಗ್ರಾಮೀಣ ಪ್ರದೇಶದಲ್ಲಿ ಶೇ.75ರಷ್ಟು ವಾಸಿಗಳು ಅಂತ್ಯೋದಯ ಅನ್ನ ಯೋಜನೆ ಅಥವಾ ಆದ್ಯತಾ ಪಡಿತರ ಚೀಟಿಯನ್ನು ಹೊಂದಲು ಅರ್ಹರಿರುತ್ತಾರೆ. 2011ರ ಜನಗಣತಿ ಪ್ರಕಾರ ಕೇಂದ್ರ ಸರ್ಕಾರವು ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿಯನ್ನು ಹೊಂದಲು 4,01,00,000 ಜನಸಂಖ್ಯೆಯನ್ನು

ನಿಗದಿಪಡಿಸಲಾಗಿದೆ. ಅದರಂತೆ ಒಟ್ಟು 10,90,990 ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಯನ್ನು ವಿತರಿಸಲಾಗಿದ್ದು, ಇದರಲ್ಲಿ 44,77,231 ಫಲಾನುಭವಿಗಳಿರುತ್ತಾರೆ ಹಾಗೂ 1,02,87,711 ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸಲಾಗಿದ್ದು, ಇದರಲ್ಲಿ 3,57,48,566 ಫಲಾನುಭವಿಗಳಿರುತ್ತಾರೆ.

ಕೇಂದ್ರ ಸರ್ಕಾರವು ನಿಗಧಿಪಡಿಸಿರುವ ಜನಸಂಖ್ಯಾ ಪ್ರಮಾಣ ಮೀರಿ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ 14,36,008 ಆದ್ಯತಾ ಪಡಿತರ ಚೀಟಿಗಳನ್ನು ವಿತರಸಲಾಗಿದ್ದು, ಇದರಲ್ಲಿ 39,25,525 ಫಲಾನುಭವಿಗಳಿರುತ್ತಾರೆ. ಆದ್ಯತಾ ಪಡಿತರ ಚೀಟಿಯನ್ನು ಕೋರಿ ನಿರಂತರವಾಗಿ ಅರ್ಜಿಗಳು ಸಲ್ಲಿಕೆಯಾಗುತ್ತಿದ್ದು, ಸದರಿ ಅರ್ಜಿಗಳನ್ನು ಪರಿಶೀಲಿಸಿ ಅರ್ಹ ಅರ್ಜಿದಾರರ ಕುಟುಂಬಗಳಿಗೆ ಪಡಿತರ ಚೀಟಿಯನ್ನು ವಿತರಿಸಲಾಗಿದೆ ಹಾಗೂ ಅನರ್ಹ ಅರ್ಜಿಗಳನ್ನು ತಿರಸ್ಕರಿಸಲಾಗುತ್ತಿದೆ. ಇದರೊಂದಿಗೆ ಕಳೆದ ಸಾಲಿನಲ್ಲಿ ಆದ್ಯತಾ/ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಯನ್ನು ಹೊಂದಲು ಅನರ್ಹರಾಗಿರುವವರು ಹೊಂದಿದ್ದ 4,32,386 ಆದ್ಯತಾ/ ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದೆ. ಈ ರೀತಿ ರದ್ದುಪಡಿಸಲಾದ ಪಡಿತರ ಚೀಟಿಗಳಿಗೆ ಎದುರಾಗಿ ಆದ್ಯತಾ ಪಡಿತರ ಚೀಟಿಯನ್ನು ಹೊಂದಲು ಅರ್ಹರಿದ್ದ 4,32,386 ಅರ್ಜಿದಾರರ ಕುಟುಂಬಗಳಿಗೆ ಆದ್ಯತಾ ಪಡಿತರ ಚೀಟಿಯನ್ನು ವಿತರಿಸಲಾಗಿದೆ. ಪ್ರಸ್ತುತ ವಿತರಿಸಲಾಗಿರುವ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳಲ್ಲಿ ರಾಜ್ಯದ ಶೇಕಡಾ 64ರಷ್ಟು ಜನಸಂಖ್ಯೆ ಫಲಾನುಭವಿಗಳಾಗಿರುತ್ತಾರೆ.

ಅನರ್ಹರು ಹೊಂದಿರುವ ಪಡಿತರ ಚೀಟಿಯನ್ನು ಪತ್ತೆ ಹಚ್ಚಿ ರದ್ದುಪಡಿಸುವ ಕಾರ್ಯ ನಿರಂತರವಾಗಿ ಚಾಲನೆಯಲ್ಲಿದ್ದು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯು ರಾಜ್ಯ ಮತ್ತು ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳ ಜೊತೆ ಮಾಹಿತಿ ವಿನಿಯಮ ಮಾಡಿಕೊಂಡು ಆದಾಯ ತೆರಿಗೆ ಪಾವತಿದಾರರು, ಜಿ.ಎಸ್.ಟಿ. ಮತ್ತು ವೃತ್ತಿ ತೆರಿಗೆ ಪಾವತಿದಾರರು, ಸರ್ಕಾರಿ ನೌಕರರು ಮತ್ತು ನಿವೃತ್ತ ನೌಕರರು, ರೂ.1.20 ಲಕ್ಷಕ್ಕಿಂತ ಹೆಚ್ಚು ವಾರ್ಷಿಕ ಆದಾಯ ಹೊಂದಿರುವವರು ಹಾಗೂ 3 ಹೇಕ್ಟರ್‌ಗಿಂತ ಹೆಚ್ಚು ಜಮೀನು ಹೊಂದಿರುವವರ ಹಾಗೂ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಹೊಂದಿರುವ ಕುಟುಂಬಗಳ ಮಾಹಿತಿಯನ್ನು ಪಡೆದು ಈ ಕುಟುಂಬಗಳು ಹೊಂದಿರುವ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳಾಗಿ ಪರಿವರ್ತಿಸಲಾಗುತ್ತಿದೆ. ಹಾಗೂ ಅನರ್ಹರಿಂದ ದಂಡ ವಸೂಲಿ ಮಾಡಲಾಗುತ್ತಿದೆ.

ಪ್ರಸ್ತುತ ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಲಾಗಿದ್ದ ಅರ್ಜಿಗಳ ಪೈಕಿ 2,95,986 ಅರ್ಜಿಗಳು ವಿಲೇವಾರಿಗೆ ಬಾಕಿ ಇರುತ್ತದೆ. ಈಗಾಗಲೇ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ 14,36,008 ಆದ್ಯತಾ/ಅಂತ್ಯೋದಯ ಪಡಿತರ ಚೀಟಿಗಳನ್ನು ವಿತರಿಸಲಾಗಿರುವ ಹಿನ್ನಲೆಯಲ್ಲಿ ಹೊಸದಾಗಿ ರಾಜ್ಯ ಸರ್ಕಾರದ ವತಿಯಿಂದ ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸುವ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ ಕ್ರಮವಹಿಸಲಾಗುವುದು.

ಆನಾಸ 156 ಡಿಆರ್‌ಎ 2023 (ಇ-ಆಫೀಸ್)

(ಕೆ.ಹೆಚ್ ಮುನಿಯಪ್ಪ)
ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು